# ಜಿಲ್ಲಾಧಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿ, ಮೈಸೂರು ಜಿಲ್ಲೆ, ಮೈಸೂರು ರವರ ನಡವಳಿಗಳು

ವಿಷಯ: ಕೋವಿಡ್-19 (ಕರೊನಾ ವೈರಾಣು ಕಾಯಿಲೆ-2019)ಯ ಸ್ಫೋಟ ಮತ್ತು ಹರಡುವುದನ್ನು ತಡೆಗಟ್ಟಲು ಸರ್ಕಾರದ ಆದೇಶದಂತೆ ಸಾರ್ವಜನಿಕರು ಕೆಲವು ವಿಶೇಷ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಕುರಿತು.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ:ಡಿಡಿ/ಎಸ್ ಎಸ್ ಯು/ಕೋವಿಡ್-19/17/19-20, ದಿನಾಂಕ: 1303.2020.

*****

DISTRICT MAGISTRATE MYSORE DISTRICT

ಪ್ರಸ್ತಾವನೆ:

ಉಲ್ಲೇಖದ ಸರ್ಕಾರದ ಆದೇಶದಂತೆ ಕೋವಿಡ್-19 (ಕರೊನಾ ವೈರಾಣು ಕಾಯಿಲೆ-2019)ಯ ಸ್ಫೋಟ ಮತ್ತು ಹರಡುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರದ ಆದೇಶದಂತೆ ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಮೈಸೂರು ಜಿಲ್ಲೆಯಲ್ಲಿ ಜರುಗುವ ಎಲ್ಲಾ ಧಾರ್ಮಿಕ ಸಂಸ್ಥೆಗಳಿಗೆ ಸೇರಿದ ಜಾತ್ರೆಗಳು, ಸಭೆ ಸಮಾರಂಭಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು, ಸಾಮೂಹಿಕವಾಗಿ ನಡೆಯುವ ಆಹಾರ ಮತ್ತು ಪ್ರಸಾದ ವಿತರಣೆಯನ್ನು ಹಾಗೂ ಸಂತೆ/ಜಾತ್ರೆ/ಉತ್ಸವ/ಸಾಮೂಹಿಕ ವಿವಾಹಗಳು ಹಾಗೂ ಇನ್ನೀತರ ಜನಸಂದಣಿ ಸೇರುವ ಕಾರ್ಯಕ್ರಮಗಳಿಂದ ಸೋಂಕು ಹರಡುವ ಸಾಧ್ಯತೆಯಿರುವ ಕಾರಣ ಜಿಲ್ಲೆಯಾದ್ಯಂತ ದಿನಾಂಕ: 17.03.2020 ರಿಂದ ಮುಂದಿನ ಆದೇಶದವರೆಗೆ ರದ್ದುಗೊಳಿಸಿ ಈ ಕೆಳಕಂಡಂತೆ ಆದೇಶಿಸಿದೆ.

## ಆದೇಶ

MYSDC/MAG1/MLO/71(3)/2020(E-95753 )

ದಿನಾಂಕ: 16-03-2020

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಅಭಿರಾಮ್ ಜಿ ಶಂಕರ್, ಭಾ.ಆ.ಸೇ. ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಯಾದ ನಾನು ಸಿ.ಆರ್.ಪಿ.ಸಿ ಸೆಕ್ಷನ್ 144(3)ರಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಕೋವಿಡ್-19 (ಕರೊನಾ ವೈರಾಣು ಕಾಯಿಲೆ-2019)ಯ ಸ್ಫೋಟ ಮತ್ತು ಹರಡುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಜರುಗುವ ಎಲ್ಲಾ ಧಾರ್ಮಿಕ ಸಂಸ್ಥೆಗಳಿಗೆ ಸೇರಿದ ಜಾತ್ರೆಗಳು, ಸಭೆ ಸಮಾರಂಭಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು, ಸಾಮೂಹಿಕವಾಗಿ ನಡೆಯುವ ಆಹಾರ ಮತ್ತು ಪ್ರಸಾದ ವಿತರಣೆಯನ್ನು ಹಾಗೂ ಸಂತೆ/ಜಾತ್ರೆ/ಉತ್ಸವ/ ಸಾಮೂಹಿಕ ವಿವಾಹಗಳು ಇನ್ನೀತರ ಜನಸಂದಣಿ ಸೇರುವ ಕಾರ್ಯಕ್ರಮಗಳಿಂದ ಸೋಂಕು ಹರಡುವ ಸಾಧ್ಯತೆಯಿರುವ ಕಾರಣದಿಂದ ಸರ್ಕಾರದ ಆದೇಶದಂತೆ ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಜಿಲ್ಲೆಯಾದ್ಯಂತ ದಿನಾಂಕ: 17.03.2020 ರಿಂದ ಮುಂದಿನ ಆದೇಶದವರೆಗೆ ರದ್ದುಗೊಳಿಸಿ ಈ ಕೆಳಕಂಡಂತೆ ಕ್ರಮ ಕೈಗೊಳ್ಳಲು ಆದೇಶಿಸಿದೆ.

1. ಜಿಲ್ಲೆಯಾದ್ಯಂತ ನಡೆಯುವಂತಹ ಸಂತೆ/ಜಾತ್ರೆ/ಉತ್ಸವ ಇನ್ನೀತರ ಜನಸಂದಣಿ ಸೇರುವ ಕಾರ್ಯಕ್ರಮಗಳನ್ನು ರದ್ದುಪಡಿಸಿದೆ.
2. ಜಿಲ್ಲೆಯಲ್ಲಿ ಜರುಗುವ ಎಲ್ಲಾ ಧಾರ್ಮಿಕ ಸಂಸ್ಥೆಗಳಿಗೆ ಸೇರಿದ ಉತ್ಸವ, ಸಾಮೂಹಿಕ ವಿವಾಹಗಳು, ಜಾತ್ರೆಗಳು, ಸಭೆ ಸಮಾರಂಭಗಳು, ಸಾಂಸ್ಕೃತಿಕ ಕಾರ್ಯಕ್ರಮಗಳ ಹಾಗೂ ಈ ಪ್ರಯುಕ್ತ ಸಾಮೂಹಿಕವಾಗಿ ನಡೆಯುವ ಸಾಮೂಹಿಕ ಆಹಾರ ಹಾಗೂ ಪ್ರಸಾದ ವಿತರಣೆಯನ್ನು ರದ್ದುಪಡಿಸಿದೆ.
3. ಬೇಸಿಗೆ ಶಿಬಿರ, ಸಮಾರಂಭಗಳು, ವಿಚಾರ ಸಂಕೀರಣಗಳು ಮತ್ತಿತರ ಕಾರ್ಯಕ್ರಮಗಳು ಆಯೋಜಿಸದಂತೆ ಸೂಚಿಸಿದೆ.
4. ಮದುವೆ ಸಮಾರಂಭಗಳನ್ನು ಹೆಚ್ಚಿನ ಜನಸಂದಣಿ ಸೇರದಂತೆ ಸರಳವಾಗಿ ಆಯೋಜಿಸಲು ಸೂಚಿಸಿದೆ.

2..

Scanned with CamScanner

5. ಮದುವೆ ಸಮಾರಂಭಗಳನ್ನು ಹೆಚ್ಚಿನ ಜನಸಂದಣಿ ಸೇರದಂತೆ ಸರಳವಾಗಿ ಆಯೋಜಿಸಲು ಸೂಚಿಸಿದೆ.

ಆದರೆ ದೇವಾಲಯಗಳು ಹಾಗೂ ಧಾರ್ಮಿಕ ಕೇಂದ್ರಗಳಲ್ಲಿ ನಡೆಯುವ ದಿನನಿತ್ಯದ ಧಾರ್ಮಿಕ ವಿಧಿ ವಿಧಾನಗಳು, ಧಾರ್ಮಿಕ ಕಾರ್ಯಕ್ರಮಗಳು, ಮುಂಜಾಗ್ರತಾ ಕ್ರಮವನ್ನು ವಹಿಸಿ ನಡೆಸುವ ಷರತ್ತಿಗೊಳಪಟ್ಟು ವಿನಾಯಿತಿ ನೀಡಿದೆ.

ಈ ಆದೇಶವನ್ನು ನನ್ನ ಸಹಿ ಮತ್ತು ಮೊಹರಿನೊಂದಿಗೆ ಈ ದಿನ ದಿನಾಂಕ: 16 03.2020 ರಂದು ಹೊರಡಿಸಿದೆ.

DISTRICT MAGISTRATE MYSORE DISTRICT

(ಅಭಿರಾಮ್ ಜಿ.ಶಂಕರ್)
ಜಿಲ್ಲಾಧಿಕಾರಿ, ಹಾಗೂ ಜಿಲ್ಲಾ ದಂಡಾಧಿಕಾರಿ,
ಮೈಸೂರು ಜಿಲ್ಲೆ, ಮೈಸೂರು

ಪ್ರತಿಯನ್ನು:-ಕೆಳಕಂಡವರಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ

1. ಪೋಲೀಸ್ ಆಯುಕ್ತರು, ಮೈಸೂರು ನಗರ, ಮೈಸೂರು.
2. ಪೋಲೀಸ್ ಅಧೀಕ್ಷಕರು, ಮೈಸೂರು ಜಿಲ್ಲೆ, ಮೈಸೂರು
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು
4. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.
5. ಉಪವಿಭಾಗಾಧಿಕಾರಿಗಳು, ಮೈಸೂರು/ಹುಣಸೂರು ಉಪವಿಭಾಗ.
6. ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳು
7. ಜಿಲ್ಲೆಯ ಎಲ್ಲಾ ದೇವಾಲಯಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ
8. ಉಪ ನಿರ್ದೇಶಕರು, ವಾರ್ತಾ ಇಲಾಖೆ, ಮೈಸೂರು ಜಿಲ್ಲೆ, ಮೈಸೂರು ರವರಿಗೆ ಕಳುಹಿಸುತ್ತಾ ದೈನಂದಿನ ಪತ್ರಿಕೆಗಳಲ್ಲಿ ಮೇಲ್ಕಂಡ ವಿಷಯವನ್ನು ಸುದ್ದಿರೂಪದಲ್ಲಿ ಪ್ರಕಟಿಸಲು ಕೋರಿದೆ.
9. ನಿಲಯ ನಿರ್ದೇಶಕರು, ಆಕಾಶವಾಣಿ, ಯಾದವಗಿರಿ, ಮೈಸೂರು ಇವರಿಗೆ ಮಾಹಿತಿಗೆ ಮತ್ತು ನಿಲಯದ ಮೂಲಕ ವಿಷಯ ಪ್ರಕಟಿಸುವ ಸಲುವಾಗಿ.

Scanned with CamScanner